# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ವಿಚಾರಣೆ– ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/411/ಗ್ರಾಪಂಕಾ/2012, ದಿನಾಂಕ:23–07–2012.
2. ಅಪರ ನಿಬಂಧಕರು ವಿಚಾರಣೆಗಳು–7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:LOK/INQ/14-A/310/2012/ARE-7 ದಿನಾಂಕ: 26-09-2017.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/INQ/14-A/310/2012/ARE-7 ದಿನಾಂಕ: 28-09-2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/762/ಗ್ರಾಪಂಕಾ/2017, ದಿನಾಂಕ: 08–11–2017.
5. ಶ್ರೀ ಕೆ.ಎಸ್.ಕೃಷ್ಣಾಚಾರ್, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ:20–12–2017.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಕೆ.ಎಸ್.ಕೃಷ್ಣಾಚಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 9 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

ಶ್ರೀ ಜವರೇಗೌಡ ಬಿನ್ ಪುಟ್ಟೇಗೌಡ ಮತ್ತು ಇತರರು ವಳಲೇಕಟ್ಟೆ ಕೊಪ್ಪಲು ಗ್ರಾಮ, ಮಂಡ್ಯ ಇವರು ದಿನಾಂಕ:14–02–2011 ರಂದು ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಲ್ಲಿ ಕೆಲಸಕ್ಕಾಗಿ ಡಿಂಕಾ ಗ್ರಾಮ ಪಂಚಾಯತಿಗೆ ಅರ್ಜಿ ಸಲ್ಲಿಸಿದ್ದು, ಶ್ರೀ ಕೆ.ಎಸ್.ಕೃಷ್ಣಾಚಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಫಿರ್ಯಾದಿಗೆ ಮತ್ತು ಇತರರಿಗೆ ಉದ್ಯೋಗ ಖಾತರಿ ಯೋಜನೆಯಲ್ಲಿ ಕೆಲಸವನ್ನು ನೀಡಲು ನೀಡಲು ರೂ.5,000/–ಗಳ ಲಂಚದ ಬೇಡಿಕೆ ಇಟ್ಟು ದಿನಾಂಕ:24–02–2011 ರಂದು ರೂ.5,000/–ಗಳ ಲಂಚವನ್ನು ಸ್ವೀಕರಿಸುವಾಗ ಲೋಕಾಯುಕ್ತ ಪೋಲೀಸರ ಬಲೆಗೆ ಬಿದ್ದು ದುರ್ನಡತೆ ಎಸಗಿದ್ದು, ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಸದರಿಯವರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966 ರ ನಿಯಮ 3(1) ಅನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಕೆ.ಎಸ್.ಕೃಷ್ಣಾಚಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತ ರವರು ಅಂಗೀಕರಿಸಿ ಶ್ರೀ ಕೆ.ಎಸ್.ಕೃಷ್ಣಾಚಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214 (1)(ಎ) ಅನುಸಾರ **"25% ನಿವೃತ್ತಿ ಸೌಲಭ್ಯಗಳನ್ನು ಶಾಶ್ವತವಾಗಿ ತಡೆಹಿಡಿಯುವ"** ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ಗ್ರಾಮ ಪಂಚಾಯತಿಯಲ್ಲಿ ಸಲ್ಲಿಸಲಾಗಿದ್ದ ಎಲ್ಲಾ ಅರ್ಜಿಗಳನ್ನು ದಿನಾಂಕ:24-2-11 ರಂದು ತಾಲ್ಲೂಕು ಪಂಚಾಯತಿಗೆ ಸಲ್ಲಿಸಲಾಗಿತ್ತು. ಯಾವುದೇ ಅರ್ಜಿ ಬಾಕಿ ಇರಲಿಲ್ಲ. ತಾಲ್ಲುಕು ಪಂಚಾಯುತಿಯಲ್ಲಿನ ಮೇಲಧಿಕಾರಿಗಳು ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿಯನ್ನು ಮಂಜೂರು ಮಾಡಬೇಕಾಗಿರುತ್ತದೆ. ದಿನಾಂಕ:18-02-2011ರಂದು ಫಾರಂ ನಂ.9ರಲ್ಲಿ ಅರ್ಜಿದಾರರಿಗೆ ಕಾಮಗಾರಿಗಳಲ್ಲಿ ಕಾರ್ಯನಿರ್ವಹಿಸಲು ನೋಟಿಸ್ ಬೋರ್ಡ್ ನಲ್ಲಿ ಹಾಕಿರುತ್ತೇನೆ . ಆದ್ದರಿಂದ ಲಂಚ ಕೇಳುವ ಪ್ರಶ್ನೆ ಉದ್ಭವಿಸುವುದಿಲ್ಲ. ದೂರುದಾರರು ತಾನು ಲೋಕಾಯುಕ್ತಕ್ಕೆ ದೂರು ಸಲ್ಲಿಸಿರುವುದಿಲ್ಲವೆಂದು ಹಾಗೂ ಲಂಚದ ಬೇಡಿಕೆ ಇಟ್ಟಿರುವುದಿಲ್ಲವೆಂದು ಹೇಳಿಕೆ ನೀಡಿರುತ್ತಾರೆ. ಸದರಿ ಪ್ರಕರಣದ ಬಗ್ಗೆ 3ನೇ ಹೆಚ್ಚುವರಿ ಜಿಲ್ಲಾ ಸೆಷನ್ ನ್ಯಾಯಾಲಯ ಶ್ರೀರಂಗಪಟ್ಟಣ ಇಲ್ಲಿ ವಿಚಾರಣೆ ನಡೆಸಲಾಗಿ ನನ್ನನ್ನು ನಿರಪರಾಧಿ ಎಂದು ತೀರ್ಪು ನೀಡಲಾಗಿದೆ. ಆದ್ದರಿಂದ ಇಲಾಖಾ ವಿಚಾರಣೆಯನ್ನು ಕೈಬಿಡಬೇಕೆಂದು ಕೋರಿರುತ್ತಾರೆ".

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ತಮ್ಮ ವಿಚಾರಣಾ ವರದಿಯ ಪುಟ ಸಂಖ್ಯೆ 6 ರಿಂದ 17 ರ ವರೆಗೆ ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ.

It is necessary to Mention the complainant and others have made an application for job under NREGA Scheme on 14-2-2011 and till 24-2-2011 the said application was not attended and the stated consideration of the application was on 24-2-2011 the day on which the trap was conducted. Thereby, it is certain eversince 14-2-2011 till 24-2-2011 no action was taken by the DGO., all these facts goes against the DGO.,

It is necessary to mention the certified copy of the judgment passed in Spl.C.C.No 26/2012 produced as per Ex.D-1 is not a ground to exonerate the DGO., from the charges. In the case on hand the PWs-1 & 2 have given clear and specific evidence. It is necessary to mention really in the event of proper consideration of the grievance of the complainant and others, absolutely, there was no occasion for the complainant to lodge the complaint. It is necessary to mention no such ground has been made out by the DGO., for registering a false case by receiving a complaint from PW-1.

For the reasons stated above the DGO., being the Government/Public Servant has failed to maintain absolute integrity besides devotion to duty and acted in a manner unbecoming of Government servant. On appreciation of entire oral and documentary evidence I hold that the charges levelled against the DGO., is established beyond all probabilities. Hence, i answer Point No.1 in the Affirmative.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತ ರವರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214 (1)(ಎ) ಅನುಸಾರ **"25% ನಿವೃತ್ತಿ ಸೌಲಭ್ಯಗಳನ್ನು ಶಾಶ್ವತವಾಗಿ ತಡೆಹಿಡಿಯುವ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಅಭಿವೃದ್ಧಿ ಅಧಿಕಾರಿ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214 (1)(ಎ) ಅನುಸಾರ **"25% ನಿವೃತ್ತಿ ಸೌಲಭ್ಯಗಳನ್ನು ಶಾಶ್ವತವಾಗಿ ತಡೆಹಿಡಿಯುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/762/ಗ್ರಾಪಂಕಾ/2017, ಬೆಂಗಳೂರು, ದಿನಾಂಕ:06-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214 (1)(ಎ) ಅನುಸಾರ **"25% ನಿವೃತ್ತಿ ಸೌಲಭ್ಯಗಳನ್ನು ಶಾಶ್ವತವಾಗಿ ತಡೆಹಿಡಿಯುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1.ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2.ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3.ಅಪರ ನಿಬಂಧಕರು, ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4.ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ಜಿಲ್ಲೆ.
6.ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಪಾಂಡವಪುರ, ಮಂಡ್ಯ ಜಿಲ್ಲೆ.
7.ಶ್ರೀ ಕೆ.ಎಸ್.ಕೃಷ್ಣಾಚಾರ್, ನಿವೃತ್ತ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ, ಡಿಂಕಾ ಗ್ರಾಮ ಪಂಚಾಯತಿ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ
8.ಗಣಕ ಕೋಶ
9.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.